ಮಾನ್ಯ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:

ವಿಷಯ: ಕೋಲಾರ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅವಧಿ ಪೂರ್ವಕ್ಕೂ ಮುನ್ನ ಜನಿಸಿದ ಮಕ್ಕಳಲ್ಲಿ ರಕ್ತದ ಕೊರತೆ ಹಾಗೂ ಅಪೌಷ್ಠಿಕತೆಯಿಂದ ಬಳಲುತ್ತಿರುವ ಸಮಸ್ಯೆಯು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ಹಾಗೂ ಸೂಕ್ತ ವೈದ್ಯಕೀಯ ನೆರವು ನೀಡುವ ಕುರಿತು.

**ಉತ್ತರ:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ರಾಜ್ಯದಲ್ಲಿ 204 ಯೋಜನೆಗಳಡಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. 69919 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಮುಂದುವರೆದು, ಗರ್ಭಿಣಿ ಮತ್ತು ಬಾಣಂತಿಯರ ಪೌಷ್ಠಿಕತೆಯನ್ನು ಹೆಚ್ಚಿಸಲು ಮಾತೃಪೂರ್ಣ ಯೋಜನೆಯಡಿ ಸರ್ಕಾರವು ಈ ಕೆಳಕಂಡ ಯೋಜನೆ/ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ.

- ಮಾತೃಪೂರ್ಣ ಯೋಜನೆಯಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರೂ ಸಹ ಯೋಜನೆಯ ಫಲಾನುಭವಿಗಳಾಗಿರುತ್ತಾರೆ.

  2024-25ನೇ ಸಾಲಿನಲ್ಲಿ ಮಾತೃಪೂರ್ಣ ಯೋಜನೆಯಡಿ ಪ್ರಯೋಜನ ಪಡೆಯುತ್ತಿರುವ ಫಲಾನುಭವಿಗಳ ವಿವರ ಈ ಕೆಳಕಂಡಂತಿದೆ.

| 2024-25 ನೇ ಸಾಲಿನ ಗುರಿ | ಗರ್ಭಿಣಿ ಮತ್ತು ಬಾಣಂತಿಯರು | ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರು | ಒಟ್ಟು ಫಲಾನುಭವಿಗಳು |
|---|---|---|---|
| 2024-25 | 810845 | 137493 | 948338 |

<u>**ಮಾತೃಪೂರ್ಣ ಯೋಜನೆಯಡಿ ಸೇವೆಗಳು:**</u>

- ಗರ್ಭಿಣಿ / ಬಾಣಂತಿಯರಿಗೆ ಅಂಗನವಾಡಿ ಕೇಂದ್ರದಲ್ಲಿ ಹೆಚ್ಚು ಪೌಷ್ಠಿಕತೆ ಅಂಶಗಳನ್ನು ಒಳಗೊಂಡ ಮಧ್ಯಾಹ್ನದ ಪೌಷ್ಠಿಕ ಊಟವನ್ನು ಒದಗಿಸುವ ಮೂಲಕ ಅವರ ಪೌಷ್ಠಿಕಾಂಶದ ಪ್ರಮಾಣವನ್ನು ಹೆಚ್ಚಿಸಿ, ಕಡಿಮೆ ತೂಕದ ಮಕ್ಕಳ ಜನನ ಹಾಗೂ ಮಕ್ಕಳಲ್ಲಿನ ಅಪೌಷ್ಠಿಕತೆ ಪ್ರಮಾಣ ಕಡಿಮೆ ಮಾಡುವುದು.

- ಗರ್ಭಿಣಿ ಮತ್ತು ಬಾಣಂತಿಯರು ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಸ್ವೀಕರಿಸುವಂತೆ ನೋಡಿಕೊಳ್ಳುವುದು.

- ಗರ್ಭಿಣಿ / ಬಾಣಂತಿಯರಿಗೆ ನಿಗಧಿಪಡಿಸಿರುವ ಪೌಷ್ಠಿಕಾಂಶದ ಆಹಾರ ಪ್ರಮಾಣ ಮತ್ತು ಸಾಮಾನ್ಯವಾಗಿ ಪ್ರತಿ ದಿನ ಅವರು ತೆಗೆದುಕೊಳ್ಳುವ ಆಹಾರ ಪ್ರಮಾಣದಲ್ಲಿನ ಅಂತರವನ್ನು ಕಡಿಮೆ ಮಾಡುವುದು.

- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ನೋಂದಾಯಿಸಲಾದ ಹಾಗೂ ಆಶಾ ಕಾರ್ಯಕರ್ತೆಯರಿಂದ ವಿತರಿಸಲಾದ ಕಬ್ಬಿಣಾಂಶದ ಮಾತ್ರೆಗಳನ್ನು, ಕ್ಯಾಲ್ಸಿಯಂ ಮಾತ್ರೆ ಮತ್ತು ಜಂತು ಹುಳುವಿನ ಮಾತ್ರೆಗಳನ್ನು 2ನೇ ತ್ರೈಮಾಸಿಕದಲ್ಲಿ ಸೇವಿಸುವುದನ್ನು ಖಚಿತ ಪಡಿಸಿಕೊಳ್ಳುವುದು.

- ರಕ್ತಹೀನತೆ ಮತ್ತು ಅಪೌಷ್ಠಿಕತೆಯಿಂದ ಬಳಲುತ್ತಿರುವ ಗರ್ಭಿಣಿ / ಬಾಣಂತಿಯರ ಹಾಗೂ ಸಮಯಕ್ಕೆ ಸರಿಯಾಗಿ ಆರೋಗ್ಯ ತಪಾಸಣೆ ಹಾಗೂ ಚುಚ್ಚುಮದ್ದು ಸೇವೆಗಳನ್ನು ಪಡೆಯುತ್ತಿರುವ ಬಗ್ಗೆ ಆರೋಗ್ಯ ಶಿಕ್ಷಣ ನೀಡುವುದು.

- ಪೌಷ್ಠಿಕತೆ, ಸ್ವಚ್ಚತೆ, ನೈರ್ಮಲ್ಯ, ಆರೋಗ್ಯ, ಪ್ರಸವ ಪೂರ್ವ ಆರೈಕೆ, ಸ್ತನ್ಯಪಾನ ಮುಂತಾದವುಗಳ ಬಗ್ಗೆ ಅಂಗನವಾಡಿ ಕೇಂದ್ರದಲ್ಲಿ ಸಮಾಲೋಚನೆ ನಡೆಸಲಾಗುತ್ತಿದೆ.

- ಪ್ರಸ್ತುತ ಅಂಗನವಾಡಿ ಕೇಂದ್ರಗಳಲ್ಲಿ ಮಾತೃಪೂರ್ಣ ಯೋಜನೆಯಡಿ ನೀಡುವ ಒಂದು ಪೂರ್ಣ ಊಟವು 185 ಗ್ರಾಂ ಅನ್ನಸಾಂಬಾರ/ ಉಪ್ಪಿಟ್ಟು ಬೇಯಿಸಿದ ಮೊಟ್ಟೆ, 150 ಮಿ.ಲಿ. ಹಾಲು ಒಳಗೊಂಡಿರುತ್ತದೆ. ಮೊಟ್ಟೆ ಸೇವಿಸದವರಿಗೆ ಮೊಳಕೆ ಭರಿಸಿದ ಕಾಳು ನೀಡಲಾಗುತ್ತಿದೆ. ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/-ರ ಘಟಕ ವೆಚ್ಚದಲ್ಲಿ ಬಿಸಿಯೂಟವನ್ನು ನೀಡಲಾಗುತ್ತಿದೆ.

- ಸದರಿ ಬಿಸಿಯೂಟವು 1342 ಕ್ಯಾಲೋರಿ, 41 ಗ್ರಾಂ ಪ್ರೊಟೀನ್ ಮತ್ತು 578 mg ಕ್ಯಾಲ್ಸಿಯಂ ಒಳಗೊಂಡಿರುತ್ತದೆ.

ಕೋಲಾರ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಭಾಗವು ಸೇರಿದಂತೆ ಕರ್ನಾಟಕ ರಾಜ್ಯಾದ್ಯಂತ ಗರ್ಭಿಣಿಯರಲ್ಲಿನ ಅಪೌಷ್ಠಿಕತೆ, ಅವಧಿ ಪೂರ್ವ ಜನಿಸಿದ ಮಕ್ಕಳಲ್ಲಿ ರಕ್ತದ ಕೊರತೆಯ ಸಮಸ್ಯೆಯನ್ನು ನಿಭಾಯಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಾರಿಯಲ್ಲಿರುವ ಮಾತೃಪೂರ್ಣ ಯೋಜನೆ, ಆರೋಗ್ಯ ತಪಾಸಣೆ ಮತ್ತು ಇತರೆ ಆರೋಗ್ಯ ಸೇವೆಗಳು ಲಭ್ಯವಾಗುವಂತೆ ಮತ್ತು ಸದರಿ ಯೋಜನೆಗಳ ಉಪಯೋಗವನ್ನು ಅರ್ಹ ಫಲಾನುಭವಿಗಳು ಪಡೆಯುವಂತೆ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಮಮಇ 130 ಐಸಿಡಿ 2024

(ಲಕ್ಷ್ಮೀ ಆರ್. ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.